# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:- RIDF ಅಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.**

**ಓದಲಾಗಿದೆ:**-1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2018 ದಿ: 02-04-2019.
2. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂಖ್ಯೆ: ಉಕೃನಿ/ಕೃಯಾಂ&ಸೂನೀ/ಸೂನೀ/ RIDF/2018-19 ದಿನಾಂಕ: 04-05-2019.

<u>ಪ್ರಸ್ತಾವನೆ:</u>

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ 2018-19ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2019-20ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಸಿದೆ.

ಮೇಲೆ (2) ರಲ್ಲಿ ಓದಲಾದ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, 2019-20ನೇ ಸಾಲಿನ ಆಯವ್ಯಯದಲ್ಲಿ ಎನ್.ಎಂ.ಎಸ್.ಎ – ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ಕ್ಕೆ ನಬಾರ್ಡ್ ಕಾಮಗಾರಿಗಳಿಗೆ ರೂ.3218.00 ಲಕ್ಷಗಳನ್ನು ಒದಗಿಸಲಾಗಿದೆ. ನಬಾರ್ಡ್ ಸಂಸ್ಥೆಯಿಂದ ಅನುಮೋದನೆಯಾಗಿರುವಂತೆ ಆರ್.ಐ.ಡಿ.ಎಫ್. ಯೋಜನೆಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಒಟ್ಟು **ರೂ.3885.73** ಲಕ್ಷ ಅನುದಾನದ ಅವಶ್ಯವಿರುತ್ತದೆ ಎಂದು ಕೃಷಿ ಆಯುಕ್ತರು ತಿಳಿಸಿರುತ್ತಾರೆ. 2019-20ನೇ ಸಾಲಿನ ಆಯವ್ಯಯದಲ್ಲಿ ರೂ.3218.**00** ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಹೆಚ್ಚುವರಿಯಾಗಿ **ರೂ.667.73** ಲಕ್ಷಗಳ ಅನುದಾನ ಅವಶ್ಯವಿರುವುದರಿಂದ ಕೆಳಕಂಡಂತೆ ಹೆಚ್ಚುವರಿ ಅನುದಾನವನ್ನು ಹಾಗೂ ರೂ.3218.00 ಲಕ್ಷಗಳ ಅನುದಾನವನ್ನು ಮೊದಲನೇ ಕಂತಿನಲ್ಲಿಯೇ ಮಂಜೂರು ಮಾಡುವಂತೆ ಕೋರಿರುತ್ತಾರೆ.

| | RIDF-21 | RIDF-22 | ಒಟ್ಟು |
|---|---|---|---|
| ಮಾರ್ಚ್ 2019 ರವರೆಗೆ ಆಗಿರುವ ವೆಚ್ಚ | 7500.00 | 2614.27 | 10114.27 |
| ನಬಾರ್ಡ್ ಸಂಸ್ಥೆಗೆ ಸಲ್ಲಿಸಿರುವ claims ವಿವರಗಳು | 7125.00 | 2481.62 | 9606.62 |
| ಅನುಮೋದಿತ ಕಾರ್ಯಕ್ರಮದನ್ವಯ ಅನುಷ್ಠಾನಗೊಳಿಸಲು ಪ್ರಸಕ್ತ (2019-20ನೇ) ಸಾಲಿನಲ್ಲಿ ಅವಶ್ಯವಿರುವ ಅನುದಾನ | - | 3885.73 | - |
| 2019-20ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಒದಗಿಸಿರುವ ಅನುದಾನ | | | 3218.00 |
| ಆರ್.ಐ.ಡಿ.ಎಫ್. ಅನುಮೋದಿತ ಕಾರ್ಯಕ್ರಮದನ್ವಯ ಅನುಷ್ಠಾನಗೊಳಿಸಲು 2019-20ನೇ ಸಾಲಿನಲ್ಲಿ ಅವಶ್ಯವಿರುವ ಹೆಚ್ಚುವರಿ ಅನುದಾನ | | | 667.73 |

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಸರ್ಕಾರವು ಪರಿಶೀಲಿಸಿ, 2019-20ನೇ ಸಾಲಿನಲ್ಲಿ Installation of Micro Irrigation System RIDF-21 & 22 Tranche ಕಾರ್ಯಕ್ರಮ ಅನುಷ್ಠಾನಕ್ಕಾಗಿ ಫೆಬ್ರವರಿ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ: 2401-00-108-1-15 ರಡಿ ಉಪ ಶೀರ್ಷಿಕೆ-436 ನಬಾರ್ಡ್ ಕಾಮಗಾರಿಗಳಿಗೆ ಒದಗಿಸಲಾಗಿರುವ ಒಟ್ಟು ರೂ.3218.00 ಲಕ್ಷಗಳ ಅನುದಾನದಲ್ಲಿ ಶೇ.25 ರಷ್ಟು ಅನುದಾನ ಮೊದಲನೇ ತ್ರೈಮಾಸಿಕಕ್ಕೆ ರೂ.804.50 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

..2)

**ಸರ್ಕಾರಿ ಆದೇಶ ಸಂ: AGRI-ACT-16/2019 ಬೆಂಗಳೂರು, ದಿನಾಂಕ: 30-05-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, 2019-20ನೇ ಸಾಲಿನಲ್ಲಿ **"Installation of Micro Irrigation Systems" RIDF-21 & 22 Tranche** ಅಡಿಯಲ್ಲಿ ಅನುಮೋದನೆಯಾಗಿರುವ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ರಡಿಯಲ್ಲಿ ಒದಗಿಸಲಾದ ರೂ.3218.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನ ಶೇ.25% ಅಂದರೆ ರೂ.804.50 ಲಕ್ಷಗಳನ್ನು (ಎಂಟು ನೂರ ನಾಲ್ಕು ಲಕ್ಷ ಮತ್ತು ಐವತ್ತು ಸಾವಿರ ರೂಪಾಯಿಗಳು ಮಾತ್ರ) ಅನುದಾನದಲ್ಲಿ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಕೃಷಿ ಆಯುಕ್ತರು ಮೇಲ್ಕಂಡ ಯೋಜನೆಯಡಿಯಲ್ಲಿ ಆದ ವೆಚ್ಚಕ್ಕೆ ಮರುಪಾವತಿ ಕ್ಲೈಮ್‌ಗಳನ್ನು ಕೂಡಲೇ ನಬಾರ್ಡ್ ಸಂಸ್ಥೆಗೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಅದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2019 ದಿನಾಂಕ 03.04.2019 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

BS Nagaratnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ.
5) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
7) ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
8) ಉಪ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
9) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸಾಂಸ್ಥಿಕ ಹಣಕಾಸು), ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ.
12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
15) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
16) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
17) ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
18) ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.